ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಮಹಿಳಾ ಕಾಲೇಜು

ಚಾಮರಾಜನಗರ ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತ, ನ್ಯಾಕ್‌ನಿಂದ B+ (CGPA: 2.74) ಮಾನ್ಯತೆ ಪಡೆದಿದೆ

**ಕೊಳ್ಳೇಗಾಲ – 571 440 ಚಾಮರಾಜನಗರ ಜಿಲ್ಲೆ**

☎: 08224-252149 🖷: 08224-256051 jsscwk@gmail.com www. jsscwkgl.org

**ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಬೀಳ್ಕೊಡುಗೆ ಸಮಾರಂಭ**

ಕೊಳ್ಳೇಗಾಲ: 05-05-2026ರಂದು ಕಾಲೇಜು ಜೀವನ ಎನ್ನುವುದು ಕೇವಲ ಪಾಠ ಪುಸ್ತಕಗಳ ಜ್ಞಾನ ಪಡೆಯುವ ಸ್ಥಳವಲ್ಲ, ಇದು ವ್ಯಕ್ತಿತ್ವ ವಿಕಸನದ ವೇದಿಕೆ, ಸ್ನೇಹ ಬೆಳೆಸುವ ತಾಣ, ಶಿಸ್ತು ಕಲಿಯುವ ಪಾಠಶಾಲೆ ಮತ್ತು ಜೀವನದ ಸವಾಲುಗಳನ್ನು ಎದುರಿಸಲು ಸಿದ್ಧಗೊಳಿಸುವ ಕೇಂದ್ರವಾಗಿದೆ. ಎಂದು ಐಕ್ಯೂಎಸಿ ಸಂಚಾಲಕರಾದ ಶ್ರೀಮತಿ ಎಸ್.ಮಮತ, ಕೊಳ್ಳೇಗಾಲ ಇವರು ಹೇಳಿದರು.

ಇಲ್ಲಿನ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಪದವಿ ವಿಭಾಗದ ಕಿರಿಯ ವಿದ್ಯಾರ್ಥಿಗಳು ಹಿರಿಯ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ **ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ** ಮಾತನಾಡಿದರು.

ಪ್ರೀಯ ವಿದ್ಯಾರ್ಥಿಗಳೇ ಜೀವನದಲ್ಲಿ ಯಶಸ್ಸು ಪಡೆಯಲು ಕೇವಲ ಅಂಕಗಳು ಸಾಕಾಗುವುದಿಲ್ಲ. ಉತ್ತಮ ನಡೆ-ನುಡಿ, ಸಮಯಪಾಲನೆ, ಪರಿಶ್ರಮ, ಪ್ರಾಮಾಣಿಕತೆ ಮತ್ತು ಮಾನವೀಯತೆ ಬಹಳ ಮುಖ್ಯ. ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯರಾದ ಡಾ ಹೆಚ್.ಎಸ್. ಕೊಂಗಳಪ್ಪ ಇವರು ನೀವು ಇಲ್ಲಿ ಓದಿದ ವರ್ಷಗಳಲ್ಲಿ ಪಾಠಗಳ ಜೊತೆಗೊಡಿ ಅನೇಕ ಚಟುವಟಿಕೆಗಳಲ್ಲಿ ಭಾಗವಹಿಸಿ ನಿಮ್ಮ ಪ್ರತಿಭೆಯನ್ನು ತೋರಿಸಿದ್ದೀರಿ. ನೀವು ಈ ಕಾಲೇಜಿನಲ್ಲಿ ಪಡೆದ ಶಿಕ್ಷಣದ ಜೊತೆಗೆ ಉತ್ತಮ ಮೌಲ್ಯಗಳನ್ನು ಕೂಡ ನಿಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಿ, ನೀವು ಯಾವ ಕ್ಷೇತ್ರಕ್ಕೆ ಹೋದರೂ ನಿಮ್ಮ ಸಾಮರ್ಥ್ಯ, ಕೌಶಲ್ಯ ಮತ್ತು ನಿಷ್ಠೆಯಿಂದ ನಿಮ್ಮದೇ ಆದ ಗುರುತು ಮೂಡಿಸಿ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಶ್ರೀಮತಿ ಪುಟ್ಟಮ್ಮ ಇವರು ಉಪಸ್ಥಿತರಿದ್ದರು.

ಐಕ್ಯೂಎಸಿ ಸಂಚಾಲಕರಾದ ಶ್ರೀಮತಿ ಎಸ್.ಮಮತರವರು ಮಾತನಾಡುತ್ತಿರುವುದು. ಚಿತ್ರದಲ್ಲಿ ಪ್ರಾಚಾರ್ಯರಾದ ಡಾ ಹೆಚ್.ಎಸ್. ಕೊಂಗಳಪ್ಪರವರು ಮತ್ತು ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಶ್ರೀಮತಿ ಪುಟ್ಟಮ್ಮರವರನ್ನು ಕಾಣಬಹುದು.




ಡಾ ಹೆಚ್.ಎಸ್. ಕೊಂಗಳಪ್ಪರವರು ಅಧ್ಯಕ್ಷೀಯ ಭಾಷಣ ಮಾಡುತ್ತಿರುವುದು



ಕಾರ್ಯಕ್ರಮದಲ್ಲಿ ಭಾಗವಹಿಸಿರುವ ಅಧ್ಯಾಪಕರು ಹಾಗೂ ವಿದ್ಯಾರ್ಥಿನಿಯರು

